ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

## ಪತ್ರಿಕಾ ತುಣುಕುಗಳು

## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE : 18/10/2019

# ಸರ್ಕಾರಿ ನೌಕರರಿಗೆ ಸಿಗಲಿದೆ ದೀಪಾವಳಿ ಗಿಫ್ಟ್

**ಶೇ.4.75 ತುಟ್ಟಿಭತ್ಯೆ ಹೆಚ್ಚಳ**

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯ ಸರ್ಕಾರಿ ನೌಕರರಿಗೆ ಬಿ.ಎಸ್. ಯಡಿಯೂರಪ್ಪ ದೀಪಾವಳಿ ಉಡುಗೊರೆ ಪ್ರಕಟಿಸಿದ್ದಾರೆ.

5.40 ಲಕ್ಷ ಸರ್ಕಾರಿ ನೌಕರರಿಗೆ ಶೇ.4.75 ತುಟ್ಟಿಭತ್ಯೆ ನೀಡಲು ತೀರ್ಮಾನಿಸಿದ್ದು, ಶುಕ್ರವಾರ ಅಧಿಕೃತ ಆದೇಶ ಹೊರಬೀಳಲಿದೆ. ಅಖಿಲ ಭಾರತ ಬೆಲೆ ಸೂಚ್ಯಂಕ ಆಧರಿಸಿ ಕೇಂದ್ರ ಸರ್ಕಾರ ನೌಕರರಿಗೆ ಜುಲೈ 1ರಿಂದ ಪೂರ್ವಾನ್ವಯವಾಗುವಂತೆ ಶೇ.5 ತುಟ್ಟಿಭತ್ಯೆ ಮಂಜೂರು ಮಾಡಿ ಆದೇಶ ಹೊರಡಿಸಿತ್ತು. ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಾಕ್ಷರಿ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿ ರಾಜ್ಯದ ನೌಕರರಿಗೂ ಶೇ. 5 ತುಟ್ಟಿಭತ್ಯೆ ನೀಡಬೇಕೆಂದು ಮನವಿ ಸಲ್ಲಿಸಿದ್ದರು.

ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಿಎಂ, ತುಟ್ಟಿ ಭತ್ಯೆ ಹೆಚ್ಚಳಕ್ಕೆ ಸಮ್ಮತಿಸಿದ್ದಾರೆ. ಪ್ರತಿ ನೌಕರರಿಗೆ ಸರಾಸರಿ 1200 ರೂ.ನಿಂದ 4 ಸಾವಿರ ರೂ. ವರೆಗೆ ಮಾಸಿಕ ವೇತನ ಹೆಚ್ಚಳವಾಗಲಿದೆ. ಈ ಬಗ್ಗೆ ವಿಜಯವಾಣಿಗೆ ಪ್ರತಿಕ್ರಿಯೆ ನೀಡಿರುವ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್. ಷಡಾಕ್ಷರಿ, ಮನವಿ ನೀಡಿದ ಎರಡೇ ದಿನಕ್ಕೆ ಸರ್ಕಾರ ಸ್ಪಂದಿಸಿದೆ. ಇಷ್ಟೊಂದು ಶೀಘ್ರವಾಗಿ ಮನವಿಗೆ ಫಲ ಸಿಕ್ಕಿರುವುದು ಇದೇ ಮೊದಲೆನಿಸುತ್ತದೆ. ಸಿಎಂ ಬಿ.ಎಸ್.ಯಡಿಯೂರಪ್ಪಗೆ ಸಂಘದ ಪರವಾಗಿ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.